**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಗಳ ನ್ಯಾಯಾಲಯ, ಹೊಸಪೇಟೆ.**

**ಸಿಸಿ ನಂಬರ್ 2217/2022**

**ಸಿ ಡಬ್ಲ್ಯೂ - 2**

**ಪಿ ಡಬ್ಲ್ಯೂ - 2**

| | |
|---|---|
| **ಸಾಕ್ಷಿಯ ಹೆಸರು -** | **ಗಫಾರ್ ಸಾಬ** |
| **ತಂದೆಯ ಹೆಸರು -** | **ಅಬ್ದುಲ್ ಸಾಬ** |
| **ವಯಸ್ಸು -** | **50 ವರ್ಷಗಳು** |
| **ಉದ್ಯೋಗ -** | **ಅಕ್ಕಸಾಲಿಗ** |
| **ವಾಸಸ್ಥಳ -** | **ಹೊಸಪೇಟೆ** |

**ಸಾಕ್ಷಿಯನ್ನು ದಿನಾಂಕಃ 21-06-2025 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕೃತ್ಯ ಸ್ಥಳ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ನಿಪಿಃ 2 ಎಂದು, ಸಾಕ್ಷಿಯ ಸಹಿಯನ್ನು ನಿಪಿಃ 2(ಎ) ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ಈಗ್ಗೆ 2-3 ವರ್ಷಗಳ ಹಿಂದೆ ನಾನು ದೇವಸ್ಥಾನದ ಹತ್ತಿರ ಇದ್ದಾಗ ಪೋಲಿಸರೊಬ್ಬರು ಬಂದು ಪಡೆದಿರುತ್ತಾರೆ. ನಿಪಿಃ 2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ.

ಈಗ ನಾನು ನೋಡುತ್ತಿರುವ 6 ಪೋಟೋಗಳಲ್ಲಿನ ವ್ಯಕ್ತಿ ನಾನೇ ಇರುತ್ತೇನೆ. ಸದರಿ ಪೋಟೋಗಳನ್ನು ಒಟ್ಟಾಗಿ ನಿಪಿಃ 3 ಎಂದು ಗುರುತಿಸಲಾಯಿತು. ನಿಪಿಃ 3 ರ ಪೋಟೋವನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**CC 2217/2022**

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**<u>ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ</u>**

ದಿಃ 02-07-2022 ರಂದು ಪ್ರಕರಣದ ಆರೋಪಿತರು ರಾಜಸ್ಥಾನದ ಉದಯಪುರದಲ್ಲಿ ನಡೆದಿರುವ ಕನ್ನಯ್ಯ ಲಾಲ್ ಎಂಬ ವ್ಯಕ್ತಿಯ ಕೊಲೆಗೆ ಸಂಬಂಧಿಸಿ ಸಾರ್ವಜನಿಕ ರಸ್ತೆಯಲ್ಲಿ ಪ್ರತಿಭಟನೆ ಮೆರವಣಿಗೆ ಹಮ್ಮಿಕೊಂಡಿದ್ದರು ಅಂದರೆ ಸರಿಯಲ್ಲ. ಅರೋಪಿತರ ಕೃತ್ಯದಿಂದ ರಸ್ತೆ ಸಂಚಾರಕ್ಕೆ ಅಡತಡೆ ಉಂಟಾಗಿತ್ತು ಮತ್ತು ಧ್ವನಿ ವರ್ಧಕ ಬಳಸಿದ್ದರಿಂದ ಜನರಿಗೆ ಕಿರಿಕಿರಿ ಉಂಟಾಗಿತ್ತು ಅಂದರೆ ಸರಿಯಲ್ಲ. ಸದರಿ ವಿಚಾರವನ್ನು ನನಗೆ ಮತ್ತು ಚಾಸಾ -3 ರವರಿಗೆ ತಿಳಿಸಿ ಕೃತ್ಯ ಸ್ಥಳವಾದ ಪಾದಗಟ್ಟೆ ಆಂಜನೇಯ ದೇವಸ್ಥಾನದ ಹತ್ತಿರ ರಸ್ತೆಯ ಮೇಲೆ ನಿಪಿಃ 2 ರ ಪಂಚನಾಮೆಯನ್ನು ಅದೇ ದಿನ ಸಂಜೆ 04.15 ರಿಂದ 05.15 ರವರೆಗೆ ಮಾಡಲಾಗಿತ್ತು ಅಂದರೆ ಸರಿಯಲ್ಲ. ನಿಪಿಃ 2 ಕ್ಕೆ ಸ್ಥಳದಲ್ಲಿಯೇ ಸಹಿ ಮಾಡಿದ್ದೆ ಅಂದರೆ ಸರಿಯಲ್ಲ.

ನನ್ನ ಸಮಕ್ಷಮ ನಿಪಿಃ 2 ರಂತೆ ಪಂಚನಾಮೆ ಕ್ರಮ ಜರುಗಿಸಿದ್ದರೂ, ನಿಪಿಃ 3 ರಂತೆ ಫೋಟೋ ತೆಗೆದಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಇಲ್ಲಾ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

<u>**ಪಾಟೀ ಸವಾಲು ಆರೋಪಿ ಪರ ಶ್ರೀ ಎನ್ ಎಸ್ ಹೆಚ್., ವಕೀಲರಿಂದಃ** ಇಲ್ಲಾ.</u>

ಮರುವಿಚಾರಣೆ ಇಲ್ಲ.

**(**ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)**

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.